**All India Radio: Bangalore**
**National Bulletin In Kannada**
**06.04.2026  07.35 a.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**06.04.2026  07.35 a.m.**

**<><><><>**

ಮುಖ್ಯಾಂಶಗಳು

1. ಪಶ್ಚಿಮ ಬಂಗಾಳ ವಿಧಾನಸಭಾ ಚುನಾವಣೆ ; ಪ್ರಧಾನಿ ನರೇಂದ್ರ ಮೋದಿ ಬಿರುಸಿನ ಪ್ರಚಾರ, ಟಿಎಂಸಿಯಿಂದ ವಿವಿಧೆಡೆ ರ‍್ಯಾಲಿ
2. ಪಶ್ಚಿಮ ಏಷ್ಯಾ ಸಂಘರ್ಷ ; ಇರಾನ್, ಕತಾರ್ ಮತ್ತು ಯುಎಇ ನಾಯಕರೊಂದಿಗೆ ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಮಾತುಕತೆ
3. ದೇಶಾದ್ಯಂತ ಅನಿಲ ಕೊರತೆಯಿಲ್ಲವೆಂದು ಸರ್ಕಾರ ಪುನರುಚ್ಚಾರ ; ಬೇಡಿಕೆ ಪೂರೈಸಲು ೫ ಕೆ.ಜಿ. ಸಿಲಿಂಡರ್ ಲಭ್ಯತೆ ಹೆಚ್ಚಳ
4. ಐಪಿಎಲ್ ಟಿ-೨೦ ಕ್ರಿಕೆಟ್ ; ಚೆನ್ನೈ ಸೂಪರ್ ಕಿಂಗ್ಸ್ ವಿರುದ್ಧ ರಾಯಲ್ ಚಾಲೆಂಜರ್ಸ್ ಬೆಂಗಳೂರಿಗೆ ಭರ್ಜರಿ ೪೩ ರನ್‌ಗಳ ಜಯ

<><><><>

ಪಶ್ಚಿಮ ಬಂಗಾಳದಲ್ಲಿ ವಿಧಾನಸಭಾ ಚುನಾವಣೆಗೆ ವಿವಿಧ ರಾಜಕೀಯ ಪಕ್ಷಗಳ ಮುಖಂಡರು ಚುನಾವಣಾ ಪ್ರಚಾರವನ್ನು ತೀವ್ರಗೊಳಿಸಿದ್ದು, ಉತ್ತರ ಬಂಗಾಳದ ಕೂಚ್ ಬಿಹಾರ್‌ನಲ್ಲಿ ನಿನ್ನೆ ಪ್ರಧಾನಿ ನರೇಂದ್ರ ಮೋದಿ ಅವರು ಬೃಹತ್ ಸಾರ್ವಜನಿಕ ಸಭೆಯನ್ನುದ್ದೇಶಿಸಿ ಮಾತನಾಡಿದರು. ಈ ವೇಳೆ, ಆಡಳಿತಾರೂಢ ತೃಣಮೂಲ ಕಾಂಗ್ರೆಸ್ ಟಿಎಂಸಿ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ ಅವರು, ಮಾಲ್ಡಾ ಜಿಲ್ಲೆಯಲ್ಲಿ ನ್ಯಾಯಾಂಗ ಅಧಿಕಾರಿಗಳನ್ನು ಒತ್ತೆಯಾಳಾಗಿರಿಸಿಕೊಂಡು ಘಟನೆಯನ್ನು ಪ್ರಸ್ತಾಪಿಸಿ ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿದೆ ಎಂದು ಟೀಕಿಸಿದರು. ಬಿಜೆಪಿ ಅಧಿಕಾರಕ್ಕೆ ಬಂದಲ್ಲಿ ಮಹಿಳಾ ಸುರಕ್ಷತೆ, ಉದ್ಯೋಗ ಮತ್ತು ಕೈಗಾರಿಕೀಕರಣಕ್ಕೆ ಆದ್ಯತೆ ನೀಡಲಾಗುವುದು ಎಂದು ಭರವಸೆ ನೀಡಿದರು.  ಮತ್ತೊಂದೆಡೆ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ, ಮುರ್ಷಿದಾಬಾದ್ ಜಿಲ್ಲೆಯ ಸಂಶೇರ್‌ಗಂಜ್, ಜಿಯಾಗಂಜ್, ಅಜೀಂಗಂಜ್ ರ‍್ಯಾಲಿಗಳಲ್ಲಿ ಪಾಲ್ಗೊಂಡು ಬಹ್ರಾಮ್‌ಪುರದಲ್ಲಿ ರೋಡ್ ಶೋ ನಡೆಸಿದರು. ಕಾಂಗ್ರೆಸ್ ಮತ್ತು ಎಡಪಕ್ಷಗಳ ನಾಯಕರು ಸಹ ಪ್ರಚಾರ ಸಭೆಗಳ ಮೂಲಕ ಮತದಾರರನ್ನು ಸೆಳೆಯುವ ಪ್ರಯತ್ನ ಮುಂದುವರೆಸಿದರು.

<><><>

ಅಸ್ಸಾಂ ವಿಧಾನಸಭಾ ಚುನಾವಣೆ ಹಿನ್ನೆಲೆಯಲ್ಲಿ ಹಿರಿಯ ಬಿಜೆಪಿ ನಾಯಕ ಹಾಗೂ ಪ್ರಧಾನಿ ನರೇಂದ್ರ ಮೋದಿ ಇಂದು ಅಸ್ಸಾಂನಲ್ಲಿ ಮೂರು ರ‍್ಯಾಲಿಗಳನ್ನುದ್ದೇಶಿಸಿ ಮಾತನಾಡಲಿದ್ದಾರೆ. ಚುನಾವಣಾ ಪ್ರಚಾರದಲ್ಲಿ ಪಾಲ್ಗೊಳ್ಳಲು ಪ್ರಧಾನಿ ನಿನ್ನೆ ಸಂಜೆ ಗುವಾಹಟಿಗೆ ಬಂದು ತಲುಪಿದ್ದಾರೆ. ಬಜಾಲಿ ಜಿಲ್ಲೆಯ ಭವಾನಿಪುರ-ಸೊರ್‌ಭೋಗ್ ನಿಂದ ಪ್ರಚಾರ ಕಾರ್ಯ ಆರಂಭಿಸಲಿರುವ ಅವರು, ನಂತರ ಹೊಜಾಯ್ ಹಾಗೂ ದಿಬ್ರುಗಢ್‌ನಲ್ಲಿ ಸಾರ್ವಜನಿಕ ಸಭೆಯನ್ನುದ್ದೇಶಿಸಿ ಮಾತನಾಡಲಿದ್ದಾರೆ.

<><><>

ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ನಿನ್ನೆ ಇರಾನ್ ವಿದೇಶಾಂಗ ಸಚಿವ ಅಬ್ಬಾಸ್ ಅರಾಗ್ಚಿ ಮತ್ತು ಕತಾರ್ ಪ್ರಧಾನಿ ಶೇಖ್ ಮೊಹಮ್ಮದ್ ಬಿನ್ ಅಬ್ದುಲ್ರಹ್ಮಾನ್ ಬಿನ್ ಜಾಸಿಮ್ ಅಲ್ ಥಾನಿ ಅವರೊಂದಿಗೆ ಮಾತುಕತೆ ನಡೆಸಿದರು. ಈ ವೇಳೆ ಅವರು ಪಶ್ಚಿಮ ಏಷ್ಯಾ ಸಂಘರ್ಷದ ಪ್ರಸ್ತುತ ಪರಿಸ್ಥಿತಿಯ ಕುರಿತು ಚರ್ಚಿಸಿದರು. ಡಾ. ಜೈಶಂಕರ್ ಯುಎಇ ವಿದೇಶಾಂಗ ಸಚಿವ ಶೇಖ್ ಅಬ್ದುಲ್ಲಾ ಬಿನ್ ಜಾಯೆದ್ ಅಲ್ ನಹ್ಯಾನ್ ಅವರೊಂದಿಗೆ ದೂರವಾಣಿ ಸಂಭಾಷಣೆ ನಡೆಸಿದರು. ಜಾಗತಿಕ ಇಂಧನ ಪೂರೈಕೆಯ ಮೇಲೆ ಸಂಘರ್ಷದ ಪರಿಣಾಮದ ಕುರಿತೂ ಮಾತುಕತೆಯಲ್ಲಿ ಪ್ರಮುಖವಾಗಿ ಚರ್ಚಿಸಲಾಗಿದೆ. ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಇರಾನ್‌ಗೆ ಒಡ್ಡಿದ ಬೆದರಿಕೆಯ ನಂತರ ಈ ಪ್ರದೇಶದಲ್ಲಿ ಉದ್ವಿಗ್ನತೆ ಹೆಚ್ಚಾದ ಹಿನ್ನೆಲೆಯಲ್ಲಿ ಡಾ. ಜೈಶಂಕರ್ ಮೂರು ಪಶ್ಚಿಮ ಏಷ್ಯಾ ರಾಷ್ಟ್ರಗಳ ನಾಯಕರೊಂದಿಗೆ ದೂರವಾಣಿ ಸಂಭಾಷಣೆ ನಡೆಸಿದರು. ಜಾಗತಿಕ ತೈಲ ಮತ್ತು ದ್ರವೀಕೃತ ನೈಸರ್ಗಿಕ ಅನಿಲ-ಎಲ್‌ಎನ್‌ಜಿ ಯ ಸುಮಾರು ಶೇಕಡಾ ೨೦ ರಷ್ಟು ಪಾಲನ್ನು ನಿರ್ವಹಿಸುವ ಹೊರ್ಮುಜ್ ಜಲಸಂಧಿಯನ್ನು ಇರಾನ್ ನಿರ್ಬಂಧಿಸಿದ ನಂತರ ಜಾಗತಿಕ ತೈಲ ಮತ್ತು ಅನಿಲ ಬೆಲೆಗಳು ಗಗನಕ್ಕೇರಿವೆ. ಪಶ್ಚಿಮ ಏಷ್ಯಾ ಭಾರತದ ಇಂಧನ ಸಂಗ್ರಹಣೆಯ ಪ್ರಮುಖ ಮೂಲವಾಗಿದೆ.

<><><>

ಪಶ್ಚಿಮ ಏಷ್ಯಾದಲ್ಲಿನ ಸಂಘರ್ಷದ ಹಿನ್ನೆಲೆಯಲ್ಲಿ ಇಸ್ರೇಲ್‌ಗೆ, ಭಾರತ ತನ್ನ ವಿಮಾನ ಸೇವೆಗಳನ್ನು ರದ್ದುಗೊಳಿಸಿದೆ. ನವದೆಹಲಿಯಿಂದ - ಟೆಲ್ ಅವಿವ್‌ಗೆ ಮೇ ೩೧ರವರೆಗೆ ಭಾರತದ ಪ್ರಮುಖ ವಿಮಾನಯಾನ ಸಂಸ್ಥೆಗಳು ಕಾರ್ಯಾಚರಣೆಯನ್ನು ರದ್ದುಗೊಳಿಸಿವೆ. ವಿಮಾನ ಸೇವೆಗಳು ರದ್ದುಗೊಂಡಿರುವುದರಿಂದ ಇಸ್ರೇಲಿನಲ್ಲಿ ಸಿಲುಕಿಕೊಂಡಿರುವ ೪೦ ಸಾವಿರಕ್ಕೂ ಅಧಿಕ ಭಾರತೀಯರನ್ನು ತಾಯ್ನಾಡಿಗೆ ಕರೆತರುವಲ್ಲಿ ಅಡಚಣೆ ಉಂಟಾಗಿದ್ದು, ಅಲ್ಲಿನ ಭಾರತೀಯ

ರಾಯಭಾರತ ಕಚೇರಿಯು ಭಾರತೀಯ ಸಮುದಾಯದೊಂದಿಗೆ ನಿರಂತರ ಸಂಪರ್ಕದಲ್ಲಿದ್ದು, ದಿನದ ೨೪ ಗಂಟೆಗಳ ತುರ್ತು ಸಹಾಯವಾಣಿಯನ್ನು ಆರಂಭಿಸಿದೆ. ಈ ನಡುವೆ ಈಜಿಪ್ಟ್ ಮತ್ತು ಜೋರ್ಡಾನ್ ಮೂಲಕ ಭೂಮಾರ್ಗದಲ್ಲಿ ಭಾರತಕ್ಕೆ ಬರಲು ಭಾರತೀಯ ಸಮುದಾಯ ಪ್ರಯತ್ನಿಸುತ್ತಿದೆ. ಭಾರತದ ರಾಯಭಾರಿ ಜೆ.ಪಿ.ಸಿಂಗ್ ಮತ್ತು ಅವರ ತಂಡ ಭಾರತೀಯ ಕಾರ್ಮಿಕರು ಮತ್ತು ವಿದ್ಯಾರ್ಥಿಗಳೊಂದಿಗೆ ವಿಡಿಯೋ ಕಾನ್ಫರೆನ್ಸಿಂಗ್ ಮೂಲಕ ಸಂವಾದ ನಡೆಸಿ ಈ ವಿಷಮ ಪರಿಸ್ಥಿತಿಯಲ್ಲಿ ಎಲ್ಲಾ ರೀತಿಯ ಸಹಕಾರ ನೀಡುವುದಾಗಿ ಭರವಸೆ ನೀಡಿದೆ.

<><><><>

ಪಶ್ಚಿಮ ಏಷ್ಯಾದಲ್ಲಿ ಸಂಘರ್ಷ ಹೆಚ್ಚುತ್ತಿರುವ ನಡುವೆ, ಹೊರ್ಮುಜ್ ಜಲಸಂಧಿಯ ಮೂಲಕ ಸಮುದ್ರ ಮಾರ್ಗವನ್ನು ಸುಲಭಗೊಳಿಸುವ ಕುರಿತು ಒಮಾನ್ ಮತ್ತು ಇರಾನ್ ಮಾತುಕತೆ ನಡೆಸಿವೆ. ಕಾರ್ಯತಂತ್ರದ ಜಲಮಾರ್ಗದ ಮೂಲಕ ಸುರಕ್ಷಿತ ಸಂಚಾರವನ್ನು ಪುನಃಸ್ಥಾಪಿಸುವ ಮಾರ್ಗಗಳನ್ನು ಅನ್ವೇಷಿಸಲು ಉಭಯ ರಾಷ್ಟ್ರಗಳ ಅಧಿಕಾರಿಗಳು ತಾಂತ್ರಿಕ ತಜ್ಞರೊಂದಿಗೆ ಭೇಟಿಯಾದರು. ಫೆಬ್ರವರಿ ಅಂತ್ಯದಲ್ಲಿ ಪ್ರಾರಂಭವಾದ ಅಮೆರಿಕಾ ಮತ್ತು ಇಸ್ರೇಲಿ ದಾಳಿ ಬೆನ್ನಲ್ಲೆ ಇರಾನ್ ಹಡಗು ಸಾಗಣೆಯನ್ನು ಗುರಿಯಾಗಿಸಿಕೊಂಡ ನಂತರ ಹೊರ್ಮುಜ್ ಜಲಸಂಧಿಯು ತೀವ್ರವಾಗಿ ಅಸ್ತವ್ಯಸ್ತಗೊಂಡಿದೆ. ಈ ಸಂಘರ್ಷವು ಗಲ್ಫ್ ಪ್ರದೇಶದಲ್ಲಿ ಸಾಗಣೆಯ ಮೇಲೆ ಹಾಗೂ ನೆರೆಯ ರಾಷ್ಟ್ರಗಳಲ್ಲಿ ಇಂಧನ ಮೂಲಸೌಕರ್ಯದ ಮೇಲೆ ಪರಿಣಾಮ ಬೀರಿದೆ, ಇದು ಜಾಗತಿಕ ಆರ್ಥಿಕ ಏರಿಳಿತಕ್ಕೆ ಕಾರಣವಾಗಿದೆ. ಹಡಗು ಸಾಗಣೆಯನ್ನು ನಿಯಂತ್ರಿಸಲು ಇರಾನ್ ಒಮಾನ್‌ನೊಂದಿಗೆ ಯುದ್ಧಾನಂತರದ ಕಡಲ ಮಾರ್ಗಸೂಚಿಯನ್ನು ಸಹ ಪ್ರಸ್ತಾಪಿಸಿದೆ, ಆದರೆ ಇರಾನ್ ಸಂಸದೀಯ ಸಮಿತಿಯು ಇತ್ತೀಚೆಗೆ ಸುಂಕಗಳನ್ನು ವಿಧಿಸಲು ಹಾಗೂ ಅಮೆರಿಕಾ ಮತ್ತು ಇಸ್ರೇಲಿ ಹಡಗುಗಳನ್ನು ಜಲಸಂಧಿಯಿಂದ ನಿಷೇಧಿಸಲು ಮತ ಚಲಾಯಿಸಿದೆ.

<><><><>

ಅಂತಾರಾಷ್ಟ್ರೀಯ ಹಡಗು ಸಂಚಾರಕ್ಕಾಗಿ ಹೊರ್ಮುಜ್ ಜಲಸಂಧಿಯನ್ನು ಕೂಡಲೇ ಮುಕ್ತಗೊಳಿಸುವಂತೆ ಇರಾನ್‌ಗೆ ಗಡುವು ವಿಧಿಸಿರುವ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಗಡುವಿನ ಕೊನೆಯ ದಿನವಾಗಿರುವ ಮಂಗಳವಾರದವರೆಗೆ ಈ ಬೇಡಿಕೆಯನ್ನು ಈಡೇರಿಸದಿದ್ದರೆ ಇರಾನ್‌ನ ವಿದ್ಯುತ್ ಸ್ಥಾವರಗಳು ಮತ್ತು ಸೇತುವೆಗಳನ್ನು ಧ್ವಂಸಗೊಳಿಸುವುದಾಗಿ ಎಚ್ಚರಿಸಿದ್ದಾರೆ. ಇರಾನ್ ಮೇಲೆ ಭೀಕರ ದಾಳಿ ನಡೆಸಿರುವುದಾಗಿ ಈ ಹಿಂದೆ ನೀಡಿದ್ದ ಎಚ್ಚರಿಕೆಯನ್ನು

ಪುನರುಚ್ಚರಿಸಿದ್ದಾರೆ. ಆದರೂ ಟೆಹ್ರಾನ್‌ನೊಂದಿಗೆ ಒಪ್ಪಂದ ಮಾಡಿಕೊಳ್ಳಲು ಉತ್ತಮ ಅವಕಾಶವಿದೆ ಎಂದು ಅವರು ತಿಳಿಸಿದ್ದಾರೆ.

<><><>

ಪಶ್ಚಿಮ ಏಷ್ಯಾದಲ್ಲಿನ ಪ್ರಸಕ್ತ ವಿದ್ಯಾಮಾನಗಳ ನಡುವೆ ದೇಶದಲ್ಲಿ ಪೆಟ್ರೋಲ್, ಡೀಸೆಲ್ ಮತ್ತು ಎಲ್‌ಪಿಜಿ ಪೂರೈಕೆಯಲ್ಲಿ ಯಾವುದೇ ಕೊರತೆಯಿಲ್ಲ ಎಂದು ಕೇಂದ್ರ ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯ ಪುನಃ ಸ್ಪಷ್ಟಪಡಿಸಿದೆ. ಈ ಕುರಿತು ಸಮಗ್ರ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಂಡಿರುವ ಸರ್ಕಾರ ಸಾರ್ವಜನಿಕರು ಆತಂಕದಿಂದ ಇಂಧನ ಸಂಗ್ರಹಣೆ ಮಾಡಬಾರದು ಎಂದು ಮನವಿ ಮಾಡಿದೆ. ಬೇಡಿಕೆಯನ್ನು ಪೂರೈಸಲು ಸರ್ಕಾರ ೫ ಕೆ.ಜಿ. ತೂಕದ ಸಣ್ಣ ಎಲ್‌ಪಿಜಿ ಸಿಲಿಂಡರ್‌ಗಳ ಮಾರಾಟವನ್ನು ಹೆಚ್ಚಿಸಿದೆ. ಮಾರ್ಚ್ ೧೩ರಿಂದ ಈವರೆಗೆ ಸುಮಾರು ೬.೬ ಲಕ್ಷ ಸಿಲಿಂಡರ್‌ಗಳು ಮಾರಾಟವಾಗಿವೆ. ಏಪ್ರಿಲ್ ೪ ರಂದು ಒಂದೇ ದಿನ ದೇಶಾದ್ಯಂತ ೫೧ ಲಕ್ಷಕ್ಕೂ ಹೆಚ್ಚು ಗೃಹಬಳಕೆ ಸಿಲಿಂಡರ್‌ಗಳನ್ನು ವಿತರಿಸಲಾಗಿದ್ದು, ಶೇಕಡ ೯೫ರಷ್ಟು ಬುಕ್ಕಿಂಗ್‌ಗಳು ಆನ್‌ಲೈನ್ ಮೂಲಕವೇ ನಡೆದಿದೆ. ಎಲ್‌ಪಿಜಿ ಮೇಲಿನ ಒತ್ತಡ ತಗ್ಗಿಸಲು ಪಿಎನ್‌ಜಿ ಸಂಪರ್ಕ ವಿಸ್ತರಿಸಲಾಗುತ್ತಿದೆ. ಈಗಾಗಲೇ ೩.೬ ಲಕ್ಷ ಮನೆಗಳಿಗೆ ಸಂಪರ್ಕ ನೀಡಲಾಗಿದ್ದು, ಹೊಸದಾಗಿ ೩.೯ ಲಕ್ಷಕ್ಕೂ ಹೆಚ್ಚು ನೋಂದಣಿಗಳು ನಡೆದಿವೆ. ಇಂಧನ ಸಂಗ್ರಹಣೆ ಮತ್ತು ಕಾಳಸಂತೆ ಮಾರಾಟ ತಡೆಯಲು ಸರ್ಕಾರ ಕಠಿಣ ಕ್ರಮ ಕೈಗೊಂಡಿದ್ದು, ಮಾರ್ಚ್‌ನಿಂದ ಈವರೆಗೆ ನಿಯಮ ಉಲ್ಲಂಘಿಸಿದ ೩೬ ವಿತರಕರನ್ನು ಅಮಾನತುಗೊಳಿಸಲಾಗಿದ್ದು, ೧ ಸಾವಿರದ ೪೦೦ಕ್ಕೂ ಹೆಚ್ಚು ನೋಟಿಸ್‌ಗಳನ್ನು ನೀಡಿ, ೫೦ ಸಾವಿರಕ್ಕೂ ಹೆಚ್ಚು ಅಕ್ರಮ ಸಿಲಿಂಡರ್‌ಗಳನ್ನು ಜಪ್ತಿ ಮಾಡಲಾಗಿದೆ.

<><><>

ದೆಹಲಿ ಸರ್ಕಾರ ಎಲ್‌ಪಿಜಿ ಸಿಲಿಂಡರ್‌ಗಳನ್ನು ಗೋದಾಮುಗಳಿಂದ ನೇರವಾಗಿ ಮಾರಾಟ ಮಾಡುವುದನ್ನು ಸಂಪೂರ್ಣವಾಗಿ ನಿಷೇಧಿಸಿದೆ. ತೈಲ ಮಾರುಕಟ್ಟೆ ಕಂಪನಿಗಳು ಎಲ್ಲ ವಿತರಕರಿಗೆ ಸ್ಪಷ್ಟ ಸೂಚನೆ ನೀಡಿದ್ದು, ಇಂತಹ ಯಾವುದೇ ಮಾರಾಟ ಕಾನೂನು ಬಾಹಿರ ಮತ್ತು ಕಠಿಣ ಕ್ರಮಕ್ಕೆ ಗುರಿಯಾಗಲಿದೆ ಎಂದು ತಿಳಿಸಿದೆ. ಈ ಕ್ರಮ ವಿತರಣಾ ವ್ಯವಸ್ಥೆಯಲ್ಲಿ ಪಾರದರ್ಶಕತೆ ತರಲು ಮತ್ತು ಕಾಳಸಂತೆಯನ್ನು ತಡೆಯಲು ಸಹಕಾರಿಯಾಗಲಿದೆ.

<><><>

ಇತ್ತೀಚಿನ ಭೀಕರ ಪ್ರವಾಹ ಮತ್ತು ಭೂಕಂಪಗಳಿಂದ ತತ್ತರಿಸಿರುವ ಅಫ್ಘಾನಿಸ್ತಾನಕ್ಕೆ ಭಾರತ ಸರ್ಕಾರ ಮಾನವೀಯ ನೆರವು ಮತ್ತು ವಿಪತ್ತು ಪರಿಹಾರ ಸಾಮಗ್ರಿಗಳನ್ನು ರವಾನಿಸಿದೆ. ಈ

ಕುರಿತು ವಿದೇಶಾಂಗ ವ್ಯವಹಾರಗಳ ಸಚಿವಾಲಯ ಮಾಹಿತಿ ನೀಡಿದ್ದು, ಸಂಕಷ್ಟದಲ್ಲಿರುವ ಅಫ್ಘಾನ್ ಜನತೆಗೆ ಬೆಂಬಲವಾಗಿ ನಿಲ್ಲುವ ಭಾರತದ ಬದ್ಧತೆಯನ್ನು ಪುನರುಚ್ಚರಿಸಿದೆ. ರವಾನಿಸಲಾದ ಸಾಮಗ್ರಿಗಳಲ್ಲಿ ಅಡುಗೆ ಉಪಕರಣ, ನೈರ್ಮಲ್ಯ ಕಿಟ್, ಪ್ಲಾಸ್ಟಿಕ್ ಶೀಟ್, ಟಾರ್ಪಲಿನ್ ಮತ್ತು ಮಗಲುವ ಚೀಲ ಸೇರಿದಂತೆ ಅಗತ್ಯ ವಸ್ತುಗಳು ಸೇರಿವೆ.

<><><><>

ಬೆಂಗಳೂರಿನ ಎಂ.ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಕಳೆದ ರಾತ್ರಿ ನಡೆದ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ಚೆನ್ನೈ ಸೂಪರ್ ಕಿಂಗ್ಸ್ ತಂಡದ ವಿರುದ್ಧ ೪೩ ರನ್‌ಗಳ ಭರ್ಜರಿ ಜಯ ದಾಖಲಿಸಿದೆ. ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಆರ್‌ಸಿಬಿ ನಿಗದಿತ ೨೦ ಓವರ್‌ಗಳಲ್ಲಿ ೩ ವಿಕೆಟ್ ನಷ್ಟಕ್ಕೆ ೨೫೦ ರನ್‌ಗಳ ಬೃಹತ್ ಮೊತ್ತ ಪೇರಿಸಿತು. ಆರ್‌ಸಿಬಿ ಪರ ಟಿಮ್‌ಡೇವಿಡ್ ಕೇವಲ ೨೫ ಎಸೆತಗಳಲ್ಲಿ ಅಜೇಯ ೭೦ ರನ್ ಗಳಿಸಿದರೆ, ದೇವದತ್ತ ಪಡಿಕ್ಕಲ್ ೫೦ ರನ್ ಗಳಿಸಿದರು. ೨೫೧ ರನ್‌ಗಳ ಬೃಹತ್ ಗುರಿ ಬೆನ್ನತ್ತಿದ ಚೆನ್ನೈ ಸೂಪರ್ ಕಿಂಗ್ಸ್ ೧೯.೪ ಓವರ್‌ಗಳಲ್ಲಿ ತನ್ನೆಲ್ಲ ವಿಕೆಟ್ ಕಳೆದುಕೊಂಡು ೨೦೭ ರನ್ ಗಳಿಸಲಷ್ಟೇ ಶಕ್ತವಾಯಿತು. ಆರ್‌ಸಿಬಿ ಪರ ಭುವನೇಶ್‌ಕುಮಾರ್ ೩ ವಿಕೆಟ್, ಜೆಕಬ್‌ಡಫಿ, ಅಭಿನಂದನ್ ಸಿಂಗ್ ಮತ್ತು ಕೃಣಾಲ್ ಪಾಂಡ್ಯ ತಲಾ ೨ ವಿಕೆಟ್ ಪಡೆದರು. ಉತ್ತಮ ಬ್ಯಾಟಿಂಗ ಪ್ರದರ್ಶನ ತೋರಿದ ಟಿಮ್‌ಡೇವಿಡ್ ಪಂದ್ಯ ಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು. ತನ್ನ ಮೊದಲೆರಡು ಪಂದ್ಯಗಳಲ್ಲಿ ಜಯ ಸಾಧಿಸಿರುವ ಆರ್‌ಸಿಬಿ ಉತ್ತಮ ನೆಟ್‌ರನ್ ರೇಟ್‌ನೊಂದಿಗೆ ಅಂಕಪಟ್ಟಿಯಲ್ಲಿ ಅಗ್ರಸ್ಥಾನದಲ್ಲಿದೆ. ಇದಕ್ಕೂ ಮುನ್ನ ನಡೆದ ಪಂದ್ಯದಲ್ಲಿ ಲಖನೌ ಸೂಪರ್ ಜೈಂಟ್ಸ್ ತಂಡ ಸನ್‌ರೈಸರ್ಸ್ ಹೈದರಾಬಾದ್ ವಿರುದ್ಧ ೫ ವಿಕೆಟ್‌ಗಳಿಂದ ಜಯದಾಖಲಿಸಿತು. ಇಂದು ಕೊಲ್ಕತ್ತಾದ ಈಡನ್‌ಗಾರ್ಡನ್ಸ್‌ನಲ್ಲಿ ನಡೆಯಲಿರುವ ಪಂದ್ಯಯದಲ್ಲಿ ಕೊಲ್ಕತ್ತಾ ನೈಟ್ ರೈಡರ್ಸ್ ಮತ್ತು ಪಂಜಾಬ್ ಕಿಂಗ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಸಂಜೆ ೭.೩೦ಕ್ಕೆ ಆರಂಭವಾಗಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>